ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿಯ, ದಿನಾಂಕ:11-10-2018ರ ನಡವಳಿಗಳು

ವಿಷಯದ ಸಂಖ್ಯೆ: ವಾಕಾಸ್ಥಾನ/134/2018-19

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮುಖ್ಯ ಅಭಿಯಂತರರು (ಯಲಹಂಕ) ರವರು ವಾರ್ಡ್-06ರ ಥಣಿಸಂದ್ರ ವ್ಯಾಪ್ತಿಯಲ್ಲಿ ಪ್ರಸ್ತಾಪಿತ 02 ಕಾಮಗಾರಿಗೆ 2016-17ನೇ ಸಾಲಿನಲ್ಲಿ ಒಟ್ಟು ಮೊತ್ತ ರೂ:11.50 ಲಕ್ಷಗಳಿಗೆ ಲೆಕ್ಕ ಶೀರ್ಷಿಕೆ ಪಿ-3110 (14th Finance commission grnats (united grants) ಅನುದಾನದಲ್ಲಿ ಪ್ರಸ್ತಾಪಿತ ಕಾಮಗಾರಿಗೆ ಜಾಬ್ ಕೋಡ್ ಪಡೆದಿದ್ದು, ಇದರ ವಿವರಗಳು ಈ ಕೆಳಕಂಡಂತೆ ಇರುತ್ತದೆ.

ಕ್ರ.ಸ	ಕಾಮಗಾರಿ ಹೆಸರು	ಪಿ.ಕೋಡ್	ಅಂದಾಜು ಮೊತ್ತ ರೂ ಲಕ್ಷಗಳಲ್ಲಿ	ಜಾಬ್ ಸಂಖ್ಯೆ
1	Providing modern dust bin in Bangalore city in ward No.06	3110	1.50	006-17-000045
2	Providing cc camera at Garbage block spots in ward No.06	3110	10.00	006-17-000044

ಘನ ಸರ್ಕಾರವು ತನ್ನ ಆದೇಶ ಸಂಖ್ಯೆ:ನಅಇ/190/ಎಂ.ಎನ್.ವೈ./2016, ದಿ:06/05/2017 ರ ಸರ್ಕಾರದ ಆದೇಶದಂತೆ ಕ್ರಮ ಸಂಖ್ಯೆ:57 ಮತ್ತು 56 ರಲ್ಲಿ ಸದರಿ ವಾರ್ಡ್‌ಗೆ ಕ್ರಮವಾಗಿ ರೂ:1.50 ಲಕ್ಷಗಳು ಮತ್ತು ರೂ:10.00 ಲಕ್ಷಗಳ ಅನುದಾನವನ್ನು ನಿಗದಿಪಡಿಸಿ ಕ್ರಿಯಾ ಯೋಜನೆಗೆ ಮತ್ತು ಕಾಮಗಾರಿಯನ್ನು ಮೆ:ಕೆ.ಆರ್.ಐ.ಡಿ.ಎಲ್. ಸಂಸ್ಥೆ ಮೂಲಕ ಕೈಗೊಳ್ಳಲು ಅನುಮೋದನೆ ನೀಡಲಾಗಿರುತ್ತದೆ. ಸದರಿ ಆದೇಶದಂತೆ ಮೇಲ್ಕಾಣಿಸಿದ 02 ಕಾಮಗಾರಿಗಳನ್ನು ಮೆ:ಕೆ.ಆರ್.ಐ.ಡಿ.ಎಲ್. ಸಂಸ್ಥೆ ಮುಖೇನ ಕೈಗೊಳ್ಳಲು ಮುಖ್ಯ ಅಭಿಯಂತರರು (ಯಲಹಂಕ) ರವರು ಪ್ರಸ್ತಾವನೆಗೆ ಶಿಫಾರಸ್ಸು ಮಾಡಿದ್ದು, ಮಾನ್ಯ ಆಯುಕ್ತರು ಒಪ್ಪಿಗೆ ನೀಡಿರುತ್ತಾರೆ.

ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ (ಸಂಗ್ರಹಣೆ ಕೋಶ) ಆದೇಶ ಸಂಖ್ಯೆ:ಆಇ/344/ವೆಚ್ಚ-12/2018, ದಿನಾಂಕ:06-04-2018 ರಲ್ಲಿ ಸರ್ಕಾರದ ಇಲಾಖೆಗಳು ಮತ್ತು ಇತರೆ ಸಂಗ್ರಹಣಾ ಸಂಸ್ಥೆಗಳು ಕರ್ನಾಟಕ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (ಕೆಆರ್‌ಐಡಿಎಲ್- ಹಿಂದಿನ ಕೆ.ಎಲ್.ಎ.ಸಿ) ಸಂಸ್ಥೆಯ ಮೂಲಕ ಗರಿಷ್ಟ ರೂ.2.00 ಕೋಟಿಗಳ ಮಿತಿಯಲ್ಲಿ ಕೈಗೊಳ್ಳಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ರ ಕಲಂ 4(ಜಿ) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ 2018-19ನೇ ಸಾಲಿಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿದೆ. ಈ ವಿಚಾರದಲ್ಲಿ ಮಾನ್ಯ ಆಯುಕ್ತರು ಕಛೇರಿ ಟಿಪ್ಪಣಿ ಸಂಖ್ಯೆ:1075/2018-19, ದಿನಾಂಕ;11-07-2018ರಂತೆ ಪಾಲಿಕೆಯ ವತಿಯಿಂದ 2018-19ನೇ ಸಾಲಿನ ಪಾಲಿಕೆಯ ಆಯವ್ಯಯದಲ್ಲಿ ನಿಗದಿಪಡಿಸಿದ ಅನುದಾನದ ಕಾಮಗಾರಿಗಳನ್ನು ಸಂಬಂಧಪಟ್ಟ ಸ್ಥಾಯಿ ಸಮಿತಿ ಅನುಮೋದನೆ ಪಡೆದು ತದನಂತರ ಸರ್ಕಾರದ ಆರ್ಥಿಕ ಇಲಾಖೆಯವರು ನೀಡಿರುವ ಷರತ್ತುಗಳಿಗೆ ನಿಯಮಾನುಸಾರವಾಗಿ ಕ್ರಮವಹಿಸಿ ಮೆ:ಕೆ.ಆರ್.ಐ.ಡಿ.ಎಲ್. ಮುಖಾಂತರ ಅನುಷ್ಠಾನಗೊಳಿಸಲು ಸೂಚಿಸಲಾಗಿದೆ.

-/-

ಈ ಹಿನ್ನಲೆಯಲ್ಲಿ ಮಾನ್ಯ ಆಯುಕ್ತರವರ ಆದೇಶದಂತೆ, ಪ್ರಸ್ತಾಪಿತ ಕಾಮಗಾರಿಗೆ ಮುಖ್ಯ ಅಭಿಯಂತರರು (ಯಲಹಂಕ) ರವರ ಕೋರಿಕೆಯಂತೆ ಸರ್ಕಾರದ ಆದೇಶದಲ್ಲಿ ಸೂಚಿಸಿರುವ ಷರತ್ತುಗಳನ್ನು ಪಾಲಿಸಲು ಸೂಚಿಸುತ್ತಾ, ಸದರಿ 02 ಕಾಮಗಾರಿಗಳ ಒಟ್ಟು ಅಂದಾಜು ಮೊತ್ತವಾದ ರೂ:11.50 ಲಕ್ಷಗಳ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಮೆ:ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ವಹಿಸಿಕೊಡುವ ಪ್ರಸ್ತಾವನೆಯ ಬಗ್ಗೆ ಸೂಕ್ತ ನಿರ್ಣಯ ಕೈಗೊಳ್ಳಲು ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಮುಂದೆ ಮಂಡಿಸಲು ಮಾನ್ಯ ಆಯುಕ್ತರು ಸಂಖ್ಯೆ:ಪಿ.ಎಸ್.ಆರ್. (ಜಿ)2076/2018-19, ದಿನಾಂಕ:25-08-2018ರಂತೆ ಅನುಮೋದಿಸಿರುವ ಮೇರೆಗೆ ವಿಶೇಷ ಆಯುಕ್ತರು (ಯೋಜನೆ)ರವರ ಕಛೇರಿ ಸಂಖ್ಯೆ:2585/2018-19, ದಿ:05-9-2018 ರಂತೆ ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಮುಂದೆ ಮಂಡಿಸಿರುವ ವಿಶೇಷ ಆಯುಕ್ತರು (ಯೋಜನೆ) ರವರ ದಿನಾಂಕ:05-09-2018ರ ಟಿಪ್ಪಣಿ.

ನಿರ್ಣಯ:- ವಿಶೇಷ ಆಯುಕ್ತರು(ಯೋಜನೆ) ರವರ ದಿ/05/09/18 ರ ಟಿಪ್ಪಣಿಯ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಲಾಯಿತು, ಪ್ರಸ್ತಾವಿತ ಕಾಮಗಾರಿಗಳನ್ನು ತುರ್ತಾಗಿ ಕೈಗೆತ್ತಿಕೊಳ್ಳುವ ಅವಶ್ಯಕತೆ ಇರುವುದಾಗಿ ಅಭಿಪ್ರಾಯ ವ್ಯಕ್ತವಾದ ಹಿನ್ನೆಲೆಯಲ್ಲಿ, ಪ್ರಸ್ತಾವಿತ ಕಾಮಗಾರಿಗಳನ್ನು ಮೆ: ಕೆ.ಆರ್.ಐ.ಡಿ.ಎಲ್. ಸಂಸ್ಥೆಯ ವತಿಯಿಂದ ಕೈಗೊಳ್ಳಲು ನಿಯಮಾನುಸಾರ ಆಯುಕ್ತರು ಅಗತ್ಯ ಕ್ರಮ ಕೈಗೊಳ್ಳುವುದೆಂದು ಸಮಿತಿಯು ತೀರ್ಮಾನಿಸಿತು.

ಕ್ರ ಸಂ	ಶ್ರೀಯುತರ ಹೆಸರು	ಪದನಾಮ	ನಿರ್ಣಯದ ಪರವಾಗಿ ಸಹಿ
1	ಇಮ್ರಾನ್ ಪಾಷ	ಅಧ್ಯಕ್ಷರು	
2	ಎಸ್.ಪಿ.ಹೇಮಲತಾ	ಸದಸ್ಯರು	S.P. Hemalatha
3	ದೀಪ ನಾಗೇಶ್	ಸದಸ್ಯರು	Deepa Nagesh
4	ಶ್ವೇತ ವಿಜಯಕುಮಾರ್	ಸದಸ್ಯರು	Shwetha
5	ಹೇಮಲತಾ ಸತೀಶ್. ಶೇಟ್	ಸದಸ್ಯರು	Hshet
6	ಯಶೋಧ ಲಕ್ಷ್ಮೀಕಾಂತ	ಸದಸ್ಯರು	Yashoda. L
7	ನೇತ್ರಾ ಪಲ್ಲವಿ.ಎಂ.	ಸದಸ್ಯರು	Nethra Pallavi. M
8	ಹಾ ನಾ ಭುವನೇಶ್ವರಿ (ಭುವನ)	ಸದಸ್ಯರು	Bhuvana
9	ಸುಜಾತ. ಡಿ.ಸಿ.ರಮೇಶ್	ಸದಸ್ಯರು	Sujatha
10	ಮಂಜುಳ	ಸದಸ್ಯರು	ಮಂಜುಳ
11	ಎಸ್.ಜಿ. ನಾಗರಾಜ್	ಸದಸ್ಯರು	S.G. Nagaraj